**ಕರ್ನಾಟಕ ಸರ್ಕಾರದ ನಡವಳಿಗಳು**

ವಿಷಯ: ಶ್ರೀ ಮಡಿವಾಳಪ್ಪ ಮಡಿವಾಕರ್, ಹಿಂದಿನ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ನಗನೂರು ಗ್ರಾಮ ಪಂಚಾಯಿತಿ, ಸುರಪುರ ತಾಲ್ಲೂಕು, ಯಾದಗಿರಿ ಜಿಲ್ಲೆ ಇವರ ವಿರುದ್ಧ ಲೋಕಾಯುಕ್ತ ವಿಚಾರಣೆ- ಅಂತಿಮ ಆದೇಶ ಹೊರಡಿಸುವ ಕುರಿತು.

ಓದಲಾಗಿದೆ:

1. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/21/ಗ್ರಾಪಂಕಾ/2016, ದಿನಾಂಕ: 21-01-2017.
2. ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ರವರ ಅ.ಸ.ಪ.ಸಂಖ್ಯೆ: **UPLOK-1/DE/155/2017/ARE-04**, ದಿನಾಂಕ: 06-08-2019.
3. ಸರ್ಕಾರದ ಸಮ ಸಂಖ್ಯೆಯ ಎರಡನೇ ಕಾರಣ ಕೇಳುವ ನೋಟೀಸ್ ದಿನಾಂಕ: 27-08-2019.
4. ಶ್ರೀ ಮಡಿವಾಳಪ್ಪ ಮಡಿವಾಳಕರ್, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಇವರು ಸರ್ಕಾರದ ಎರಡನೇ ಕಾರಣ ಕೇಳುವ ನೋಟೀಸ್‌ಗೆ ನೀಡಿರುವ ಲಿಖಿತ ಹೇಳಿಕೆ ದಿನಾಂಕ: 03-10-2019.

**ಪ್ರಸ್ತಾವನೆ :**

ಮೇಲೆ ಕ್ರಮ ಸಂಖ್ಯೆ (1) ರಲ್ಲಿ ಓದಲಾದ ಸರ್ಕಾರದ ಆದೇಶದಲ್ಲಿ ಶ್ರೀ ಮಡಿವಾಳಪ್ಪ ಮಡಿವಾಳಕರ್, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ನಗನೂರು ಗ್ರಾಮ ಪಂಚಾಯಿತಿ, ಸುರಪುರ ತಾಲ್ಲೂಕು, ಯಾದಗಿರಿ ಜಿಲ್ಲೆ ಇವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ 14-A ರಡಿಯಲ್ಲಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸಲಾಯಿತು. ಅದರಂತೆ ಅಪರ ನಿಬಂಧಕರು, ವಿಚಾರಣೆಗಳು-04, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರು ಸದರಿಯವರ ವಿರುದ್ಧ ಈ ಕೆಳಕಂಡ ಆರೋಪದ ಮೇಲೆ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ 11ರಡಿಯಲ್ಲಿ ಇಲಾಖಾ ವಿಚಾರಣೆ ನಡೆಸಿರುತ್ತಾರೆ.

**"ದೋಷಾರೋಪಣೆ":**

"That, you-sri madivalappa madivalakar, while working as panchayatha development officer, naganoor grama panchayatha, surapur taluk, yadagiri district during the year 2015-2016 no order passed on the application of the complainant / sri somanna s/o sanjveppa akki, dated:02.10.2015 in cancelletion of the propetrty no.7-101 no action taken for more than 10 months. Thereby you- DGO being a v government servent failed to mainten absolute intergrity and devotion to duty, the act which is unbecoming of a government servent and thereby committed misconduct as enumetatded U/R 3(1)(i) to (iii) of karnatka civil services(condut) rules,1966.

ವಿಚಾರಣಾಧಿಕಾರಿಯವರು, ಮೇಲೆ ಕ್ರಮ ಸಂಖ್ಯೆ (2)ರಲ್ಲಿ ಓದಲಾದ ವರದಿಯಲ್ಲಿ ಶ್ರೀ ಮಡಿವಾಳಪ್ಪ ಮಡಿವಾಳಕರ್, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ನಗನೂರು ಗ್ರಾಮ ಪಂಚಾಯಿತಿ, ಸುರಪುರ ತಾಲ್ಲೂಕು, ಯಾದಗಿರಿ ಜಿಲ್ಲೆ ರವರ ವಿರುದ್ಧದ ಆರೋಪವು ಸಾಬೀತಾಗಿರುವುದೆಂದು ನಿರ್ಣಯಿಸಿರುತ್ತಾರೆ. ಸದರಿಯವರ ವಿರುದ್ಧ ಸಾಬೀತಾಗಿರುವ ಆರೋಪಕ್ಕೆ ಅನುಗುಣವಾಗಿ ಸದರಿಯವರಿಗೆ **" it is hereby recommended to the government for imposing penality of withholding two annual increments payable to DGO sri madivalppa madivalakkar, panchayatha development officer, naganoor grama panchayatha, surapur taluk, yadagiri district with cumulative effect."** ದಂಡನೆ ವಿಧಿಸಲು ಶಿಫಾರಸ್ಸು ಮಾಡಿರುತ್ತಾರೆ.

ಈ ಸಂಬಂಧ ಆರೋಪಿತ ನೌಕರರಿಗೆ ನಿಯಮಾನುಸಾರ ಕ್ರಮ ಸಂಖ್ಯೆ (3) ರಲ್ಲಿ ಓದಲಾದ ಸರ್ಕಾರದ ಪತ್ರದಲ್ಲಿ ವಿಚಾರಣಾಧಿಕಾರಿಯವರ ವಿಚಾರಣಾ ವರದಿ ಮತ್ತು ಮಾನ್ಯ ಉಪಲೋಕಾಯುಕ್ತರ ಶಿಫಾರಸ್ಸಿನ ಪ್ರತಿಯೊಂದಿಗೆ ಎರಡನೇ ಕಾರಣ ಕೇಳುವ ನೋಟಿಸನ್ನು ಜಾರಿಗೊಳಿಸಲಾಗಿತ್ತು. ಸದರಿ ನೋಟೀಸಿಗೆ ಆಪಾದಿತ ನೌಕರರು ಮೇಲೆ ಕ್ರಮ ಸಂಖ್ಯೆ (4)ರಲ್ಲಿ ಓದಲಾದ ಮನವಿ ಮೂಲಕ ತಮ್ಮ ಲಿಖಿತ ಹೇಳಿಕೆ ಸಲ್ಲಿಸಿರುತ್ತಾರೆ.

ಆಪಾದಿತ ನೌಕರರು ಸರ್ಕಾರದ ಎರಡನೇ ಕಾರಣ ಕೇಳುವ ನೋಟೀಸ್‌ಗೆ ನೀಡಿರುವ ಲಿಖಿತ ಹೇಳಿಕೆ/ಸಮಜಾಯಿಷಿಯಲ್ಲಿ ಈ ಕೆಳಕಂಡ ಪ್ರಮುಖ ಆಕ್ಷೇಪಣೆಗಳನ್ನು ಸಲ್ಲಿಸಿರುತ್ತಾರೆ.

- ಸದರಿ ಆಪಾದಿತ ನೌಕರರು ತಮ್ಮ ಲಿಖಿತ ಹೇಳಿಕೆ / ಸಮಜಾಯಿಷಿಯಲ್ಲಿ ತಾವು ನಗನೂರು ಗ್ರಾಮ ಪಂಚಾಯಿತಿಯಲ್ಲಿ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಯಾಗಿ ದಿನಾಂಕ: 10/12/2015ರಿಂದ ಕಾರ್ಯನಿರ್ವಹಿಸುತ್ತಿದ್ದು, ದೂರುದಾರರ ಕೋರಿಕೆಯನ್ವಯ ಕಾರ್ಯನಿರ್ವಾಹಣಾಧಿಕಾರಿ, ಸುರಪುರ ತಾಲ್ಲೂಕು ಪಂಚಾಯಿತಿ ಇವರು ಗ್ರಾಮದ ಆಸ್ತಿ ಸಂಖ್ಯೆ: 7-101 ಅನ್ನು ರದ್ದುಪಡಿಸುವಂತೆ ದಿನಾಂಕ: 10/04/2012ರಂದು ಆದೇಶ ಮಾಡಿದ್ದರೂ ಸಹ ಈ ಹಿಂದೆ ಕಾರ್ಯನಿರ್ವಹಿಸಿದ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ಯಾವುದೇ ಕ್ರಮ ಕೈಗೊಂಡಿರುವುದಿಲ್ಲವೆಂಥು ಸದರಿ ಗ್ರಾಮದ ಆಸ್ತಿ ಸಂಖ್ಯೆ: 7-101 ಅನ್ನು ಸೃಜನೆ ಮಾಡಿ ಅವರ ಹೆಸರಿನಲ್ಲಿ ನೊಂದಾಯಿಸಿಕೊಂಡಿರುವ ನಗನೂರು ಗ್ರಾಮ ಪಂಚಾಯಿತಿಯಲ್ಲಿ ಬಿಲ್ ಕಲೆಕ್ಟರ್‌ರಾಗಿರುವ ಶ್ರೀ ಗುರುಬಸಯ್ಯ ಘಂಟಿ ಇವರು ಅಧಿಕಾರ ದುರುಪಯೋಗಪಡಿಸಿಕೊಂಡಿರುವುದಾಗಿ ತಿಳಿಸಿರುತ್ತಾರೆ.
- ಸದರಿ ಆಸ್ತಿ ಸಂಖ್ಯೆಯನ್ನು ತಿದ್ದುಪಡಿ ಮಾಡುವ ಅಧಿಕಾರ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗೆ ಇರುವುದಿಲ್ಲ. ಈ ವಿಷಯಕ್ಕೆ ಸಂಬಂಧಿಸಿದಂತೆ ಪಂಚಾಯಿತಿ ಸಾಮಾನ್ಯ ಸಭೆಯಲ್ಲಿ ಮಂಡಿಸಿ, ಗೊತ್ತುವಳಿ ಸ್ವೀಕರಿಸುವ ಮೂಲಕ ತಿದ್ದುಪಡಿ ಮಾಡುವ ಅಧಿಕಾರ ಪಂಚಾಯಿತಿಗೆ ಇರುವುದರಿಂದ ತಮ್ಮಿಂದ ಯಾವುದೇ ಕರ್ತವ್ಯ ವಿಳಂಬವಾಗಿರುವುದಿಲ್ಲವೆಂದು ತಿಳಿಸಿರುತ್ತಾರೆ.

ಆಪಾದಿತ ನೌಕರರು ಎರಡನೇ ಕಾರಣ ಕೇಳುವ ನೋಟೀಸ್‌ನಲ್ಲಿ ಎತ್ತಿರುವ ಆಕ್ಷೇಪಣೆಗಳಿಗೆ ಸಂಬಂಧಪಟ್ಟಂತೆ ವಿಚಾರಣಾಧಿಕಾರಿಯವರು ತಮ್ಮ ವರದಿಯಲ್ಲಿ ವಿವರವಾದ ಕಾರಣಗಳನ್ನು ನೀಡಿರುತ್ತಾರೆ. ಸದರಿ ಕಾರಣಗಳು ಸಮರ್ಥನೀಯವಾಗಿವೆ. ಆರೋಪಿತ ನೌಕರರು ನೀಡಿರುವ ಮನವಿಯಲ್ಲಿರುವ ವಿವರಣೆಯನ್ನು ಪರಿಶೀಲಿಸಲಾಗಿದೆ. ಈ ವಿವರಣೆಯನ್ನು ಸ್ಥಾಪಿತ ನಿಯಮಾವಳಿಗಳ ಪ್ರಕಾರ ಒಪ್ಪಲು ಸಾಧ್ಯವಿರುವುದಿಲ್ಲ.

ವಿಚಾರಣಾಧಿಕಾರಿಯವರು ತಮ್ಮ ವರದಿಯಲ್ಲಿ ಆಪಾದಿತ ನೌಕರರ ವಿರುದ್ಧದ ಆರೋಪಗಳನ್ನು ವಿಚಾರಣಾಧಿಕಾರಿಗಳು ವಿಚಾರಣೆ ನಡೆಸಿ ಸಲ್ಲಿಸಿರುವ ವಿಚಾರಣಾ ವರದಿ ಹಾಗೂ ಅಪಾದಿತ ನೌಕರರ ಲಿಖಿತ ಹೇಳಿಕೆ/ಸಮಜಾಯಿಷಿಯಲ್ಲಿನ ಅಂಶಗಳನ್ನು ಪರಿಶೀಲಿಸಿದಾಗ ಕೆಳಕಂಡ ಅಂಶಗಳು ಕಂಡುಬರುತ್ತವೆ.

- ದೂರುದಾರರಾದ ಶ್ರೀ ಸೋಮಣ್ಣ ತಂದೆ ಸಂಜೀವಪ್ಪ ಅಕ್ಕಿ ಇವರು **ಗ್ರಾಮದ ಆಸ್ತಿ ಸಂಖ್ಯೆ: 7-101 ಅನ್ನು ರದ್ದುಪಡಿಸಿ ಆಸ್ತಿ ಸಂಖ್ಯೆ: 8-36 ಎಂದು ತಮ್ಮ ಹೆಸರಿಗೆ ನಮೂದು ಮಾಡಿಕೊಡುವಂತೆ** ದಿನಾಂಕ:02/10/2015ರಂದು ಅರ್ಜಿ ಸಲ್ಲಿಸಿದ್ದರೂ ಹಾಗೂ ಕಾರ್ಯನಿರ್ವಾಹಣಾಧಿಕಾರಿ, ಸುರಪುರ ತಾಲ್ಲೂಕು ಪಂಚಾಯಿತಿ ಇವರು ದಿನಾಂಕ: 10/04/2012ರಂದು ಸದರಿ ಆಸ್ತಿಯನ್ನು ರದ್ದುಪಡಿಸಿ ಆದೇಶ ಮಾಡಿದ್ದರೂ ಸಹ ಆಪಾದಿತ ನೌಕರರು ತಾವು ಈ ಪಂಚಾಯಿತಿಯ ಅಭಿವೃದ್ಧಿ ಅಧಿಕಾರಿಯಾಗಿ ದಿನಾಂಕ:10.12.2015ರಂದು ಅಧಿಕಾರ ವಹಿಸಿಕೊಂಡಿರುವುದಾಗಿ ಹಾಗೂ ತಮಗಿಂತಲೂಪೂರ್ವದಲ್ಲಿ ಕಾರ್ಯನಿರ್ವಹಿಸಿದ ಕೆಲವು ಅಧಿಕಾರಿಗಳು ಆಸ್ತಿ ಸಂಖ್ಯೆ:7-101ರನ್ನು ರದ್ದು ಪಡಿಸಲು ಯಾವುದೇ ಕ್ರಮ ಕೈಗೊಂಡಿರುವುದಿಲ್ಲವೆಂದು ಲಿಖಿತ ಹೇಳಿಕೆಯನ್ನು ನೀಡಿರುವುದು ಸರಿ ಅಷ್ಟೆ, ಅದರೆ ಆಪಾದಿತ ನೌಕರರು ಆಸ್ತಿ ಸಂಖ್ಯೆ:7-101ರನ್ನು ರದ್ದು ಪಡಿಸಿಲು ಯಾವುದೇ ಕ್ರಮ ತೆಗೆದುಕೊಂಡಿರುವುದಿಲ್ಲ, ಸದರಿ ಆಸ್ತಿ ಸಂಖ್ಯೆಯನ್ನು ರದ್ದು ಪಡಿಸಲು ಗ್ರಾಮ ಪಂಚಾಯಿತಿಯ ಸಾಮಾನ್ಯ ಸಭೆಯಲ್ಲಿ ಯಾವುದೇ ಪ್ರಸ್ತಾವನೆಯನ್ನು ಮಂಡಿಸಿರುವುದಿಲ್ಲ. ಹೀಗೆ ಉದ್ದೇಶ ಪೂರ್ವಕವಾಗಿ ವಿಳಂಬ ನೀತಿ ಅನುಸರಿಸಿರುವುದು ಸ್ಪಷ್ಟವಾಗಿ ಕಂಡುಬರುತ್ತದೆ.
- ಸರ್ಕಾರವು ಎಲ್ಲಾ ಅಂಶಗಳನ್ನು ವಿವರವಾಗಿ ಪರಿಶೀಲಿಸಿದೆ. ವಿಚಾರಣಾಧಿಕಾರಿಯವರು ವಿವರವಾದ ಸಮರ್ಥನೆಯೊಂದಿಗೆ ಆರೋಪವನ್ನು ಸಾಬೀತುಪಡಿಸಿರುತ್ತಾರೆ. ಮಾನ್ಯ ಉಪಲೋಕಾಯುಕ್ತರು ವಿಚಾರಣಾ ವರದಿಯನ್ನು ಅಂಗೀಕರಿಸಿ ಆರೋಪದ ತೀವ್ರತೆಗೆ ಅನುಗುಣವಾಗಿ ಮಾನ್ಯ ಉಪ ಲೋಕಾಯುಕ್ತರ ಶಿಫಾರಸ್ಸಿನಂತೆ ಶ್ರೀ ಮಡಿವಾಳಪ್ಪ ಮಡಿವಾಳಪ್ಪ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ನಗನೂರು ಗ್ರಾಮ ಪಂಚಾಯಿತಿ, ಸುರಪುರ ತಾಲ್ಲೂಕು, ಯಾದಗಿರಿ ಜಿಲ್ಲೆ ಇವರಿಗೆ ಕರ್ನಾಟಕ ನಾಗರೀಕ ಸೇವಾ(ವರ್ಗೀಕರಣ, ನಿಯಂತ್ರಣ, ಮೇಲ್ಮನವಿ) ನಿಯಮಗಳು, 1957ರ ನಿಯಮ 8(iii) ರಡಿ ನಿರ್ದಿಷ್ಟಪಡಿಸಿದಂತೆ **ಎರಡು ವಾರ್ಷಿಕ ವೇತನ ಬಡ್ತಿಗಳನ್ನು ಸಂಚಿತ ಪರಿಣಾಮದೊಂದಿಗೆ ತಡೆಯಿಡಿಯುವ ದಂಡನೆಯನ್ನು** ವಿಧಿಸಲು ನಿರ್ಣಯಿಸಿದೆ.

ಅದರಂತೆ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/676/ಗ್ರಾಪಂಅ/2019,**
**ಬೆಂಗಳೂರು, ದಿನಾಂಕ:04-01-2020.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಸರ್ಕಾರವು ಶ್ರೀ ಮಡಿವಾಳಪ್ಪ ಮಡಿವಾಳಕರ್, ಹಿಂದಿನ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ನಗನೂರು ಗ್ರಾಮ ಪಂಚಾಯಿತಿ, ಸುರಪುರ ತಾಲ್ಲೂಕು, ಯಾದಗಿರಿ ಜಿಲ್ಲೆ ಇವರಿಗೆ ಕರ್ನಾಟಕ ನಾಗರೀಕ ಸೇವಾ(ವರ್ಗೀಕರಣ, ನಿಯಂತ್ರಣ, ಮೇಲ್ಮನವಿ) ನಿಯಮಗಳು, 1957ರ ನಿಯಮ 8(iii) ರಡಿ ನಿರ್ದಿಷ್ಟಪಡಿಸಿದಂತೆ **ಎರಡು ವಾರ್ಷಿಕ ವೇತನ ಬಡ್ತಿಗಳನ್ನು ಸಂಚಿತ ಪರಿಣಾಮದೊಂದಿಗೆ ತಡೆಯಿಡಿಯುವ ದಂಡನೆ ವಿಧಿಸಿ** ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ರಮೇಶ್ ಡಿ.ಓ)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

<u>**ಗೆ,**</u>

1. ಮಹಾಲೇಖಪಾಲರು, ಕರ್ನಾಟಕ ಬೆಂಗಳೂರು.
2. ಮಾನ್ಯ ಉಪಲೋಕಾಯುಕ್ತ-2, ರವರು ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
3. ಅಪರ ನಿಬಂಧಕರು, ವಿಚಾರಣೆಗಳು-04, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
4. ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
5. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯಿತಿ, ಯಾದಗಿರಿ ಜಿಲ್ಲೆ.
6. ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯಿತಿ, ಸುರಪುರ ಯಾದಗಿರಿ ಜಿಲ್ಲೆ.
7. ಶ್ರೀ ಮಡಿವಾಳಪ್ಪ ಮಡಿವಾಳಪ್ಪ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ನಗನೂರು ಗ್ರಾಮ ಪಂಚಾಯಿತಿ, ಸುರಪುರ ತಾಲ್ಲೂಕು, ಯಾದಗಿರಿ ಜಿಲ್ಲೆ
8. ಗಣಕ ಕೋಶ.
9. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.